ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ : 22ನೇ ಜುಲೈ, 2019

ದೇಸಿ ಗೋವುಗಳ ಸಂರಕ್ಷಣೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

461 (462) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇಸಿ ಗೋವುಗಳ ರಕ್ಷಣೆ ಅವುಗಳ ತಳಿ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳಾವುವು;

(ಆ) ಜಾನುವಾರುಗಳ ಅಕ್ರಮ ಸಾಗಾಟ ಮತ್ತು ಅನಧಿಕೃತ ಕಸಾಯಿ ಖಾನೆಗಳಲ್ಲಿ ಗೋವುಗಳನ್ನು ಮಾಂಸಕ್ಕಾಗಿ ಹತ್ಯೆ ಮಾಡುತ್ತಿರುವುದರಿಂದ ರಾಜ್ಯದಲ್ಲಿ ಗೋವುಗಳ ಪ್ರಮಾಣ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಕ್ರಮವಾಗಿ ಗೋವುಗಳ ಸಾಗಾಟ ಮತ್ತು ಹತ್ಯೆಯನ್ನು ನಿಲ್ಲಿಸಲು ಗೋವುಗಳ ಸಂರಕ್ಷಣಾ ಕಾನೂನನ್ನು ರಚಿಸುವ ಬಗ್ಗೆ ಸರ್ಕಾರದ ನಿಲುವೇನು; ಗೋವುಗಳ ಸಂರಕ್ಷಣಾ ಕಾನೂನನ್ನು ಯಾವ ಕಾಲಮಿತಿಯೊಳಗೆ ರಚಿಸಲಾಗುವುದು ಮತ್ತು ಯಾವಾಗ ಜಾರಿಗೆ ತರಲಾಗುವುದು ?